ಹುಬ್ಬಳ್ಳಿ ಮತ್ತು ಮೈಸೂರು ಘಟಕಗಳಲ್ಲಿರುವ ತರಬೇತಿ ಕೇಂದ್ರಗಳ ಮುಖಾಂತರ ರೈತರ ತರಬೇತಿ ಕಾರ್ಯಕ್ರಮವನ್ನು ನಿರಂತರವಾಗಿ ಹಮ್ಮಿಕೊಂಡಿದ್ದು, ದಲ್ಲಾಲಿ ನೀಡದಂತೆ ಹಾಗೂ ಸ್ವಚ್ಛ ಮತ್ತು ಒಣಗಿದ ಕೃಷಿ ಹುಟ್ಟುವಳಿಗಳನ್ನು ಮಾರಾಟಕ್ಕೆ ತರಲು ತಿಳುವಳಿಕೆ ನೀಡಲಾಗುತ್ತಿದೆ.

ಇ) ಹೌದು, ಪ್ರಸ್ತುತ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಎಲ್ಲಾ ಕ್ರಮ ಕೈಗೊಳ್ಳಲಾಗುತ್ತಿದೆ.

533(955) ಶ್ರೀ ಹಾಲಾಡಿ ಶ್ರೀನಿವಾಸ್ ಶೆಟ್ಟಿ (ಕುಂದಾಪುರ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ಪೌಷ್ಟಿಕ ಆಹಾರ ತಯಾರಿಸಲು ತಿಂಗಳೊಂದರ ಪರವಾನಗಿ ಮೂಲಕ ಪಡಿತರ ಅಂಗಡಿಗಳಲ್ಲಿ ಕೊಡುತ್ತಿದ್ದ 10 ಲೀಟರ್ ಸೀಮೆ ಎಣ್ಣೆಯನ್ನು ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸೀಮೆ ಎಣ್ಣೆ ಕೊಡುವುದನ್ನು ನಿಲ್ಲಿಸಿರುವುದರಿಂದ ಅಂಗನವಾಡಿ ಕೇಂದ್ರಗಳಲ್ಲಿ ಪೌಷ್ಟಿಕ ಆಹಾರ ತಯಾರಿಸಲು ಸಮಸ್ಯೆ ಉಂಟಾಗಿರುವುದರಿಂದ ಹಿಂದಿನಂತೆ ಸೀಮೆ ಎಣ್ಣೆ ಕೊಡುವ ವ್ಯವಸ್ಥೆಯನ್ನು ಮುಂದುವರೆಸಲಾಗುವುದೇ;

ಇ) ಪೌಷ್ಟಿಕ ಆಹಾರ ತಯಾರಿಸಲು ಅಂಗನವಾಡಿ ಕೇಂದ್ರಗಳಿಗೆ ಸೀಮೆ ಎಣ್ಣೆಯ ಬದಲು ಗ್ಯಾಸ್ ಮತ್ತು ಗ್ಯಾಸ್ ಸ್ಟೌವ್ ಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೆ;

ಈ) ಹೌದಾದಲ್ಲಿ ಯಾವಾಗ ನೀಡಲಾಗುವುದು?

ಶ್ರೀಮತಿ ಭಾಗೀರಥಿ ಮರಳಸಿದ್ಧನಗೌಡ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ) ಕಳೆದ ಒಂದು ವರ್ಷದಿಂದ ಪಡಿತರ ವ್ಯವಸ್ಥೆಯಡಿ ಅಂಗನವಾಡಿ ಕೇಂದ್ರಗಳಿಗೆ ಸೀಮೆ ಎಣ್ಣೆ ಕೊಡುವುದನ್ನು ನಿಲ್ಲಿಸಿರುತ್ತಾರೆ.

ಆ) ಈ ವ್ಯವಸ್ಥೆಯನ್ನು ಮುಂದುವರೆಸಲು ಆಹಾರ ಸರಬರಾಜು ಮತ್ತು ನಾಗರೀಕ ಪೂರೈಕೆ ಇಲಾಖೆಯನ್ನು ಕೋರಲಾಗಿರುತ್ತದೆ.

ಇ) ಪರಿಶೀಲನೆಯಲ್ಲಿಲ್ಲ.

ಈ) ಅನ್ವಯಿಸುವುದಿಲ್ಲ.

534(957) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನಲ್ಲಿ ಬಿಪಿಎಲ್ ಅಡಿಯಲ್ಲಿ ಎಷ್ಟು ಫಲಾನುಭವಿಗಳನ್ನು ಗುರುತಿಸಲಾಗಿದೆ;